ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

28

ಇಲಾಖೆ / ವಿಷಯ : DEPARTMENT / SUBJECT: ಗಡಿ ವಿವಾದ - ಬೆಳಗಾವಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯಕರ್ನಾಟಕ ದಿನಾಂಕ : DATE : 16/3/21

# ಧ್ವಜ ತೆರವು ಮಾಡದಿದ್ದರೆ ಕನ್ನಡಿಗರ ಅಂಗಡಿ ಬಂದ್

ವಿ.ಕ. 16/3/21

## ಶಿವಸೇನೆ ಎಚ್ಚರಿಕೆ । ಮಾರ್ಚ್ 20ರ ತನಕ ಗಡುವು

**ಬೆಳಗಾವಿ:** ಬೆಳಗಾವಿ ಮಹಾನಗರ ಪಾಲಿಕೆ ಮುಂದೆ ಸ್ಥಾಪಿಸಿರುವ ಕನ್ನಡ ಧ್ವಜ ಸ್ತಂಭವವನ್ನು ತೆರವು ಮಾಡದೇ ಇದ್ದರೆ ಮಹಾರಾಷ್ಟ್ರದಲ್ಲಿ ಕನ್ನಡಿಗರ ಅಂಗಡಿಗಳನ್ನು ಬಂದ್ ಮಾಡಿಸುತ್ತೇವೆ ಎಂದು ಶಿವಸೇನೆ ಧಮಕಿ ಹಾಕಿದೆ.

ಮಹಾರಾಷ್ಟ್ರದ ಕೊಲ್ಲಾಪುರದಲ್ಲಿ ಸೋಮವಾರ ಪತ್ರಿಕಾಗೋಷ್ಠಿ ನಡೆಸಿರುವ ಶಿವಸೇನೆ ಮುಖಂಡ ವಿಜಯ ದೇವಣೆ, ''ಕನ್ನಡದ ಧ್ವಜವನ್ನು ಮಾರ್ಚ್ 20 ರೊಳಗಾಗಿ ತೆರವು ಮಾಡದೇ ಹೋದರೆ ಮಹಾರಾಷ್ಟ್ರದಲ್ಲಿರುವ ಕನ್ನಡಿಗರ ಅಂಗಡಿಗಳನ್ನು ಬಂದ್ ಮಾಡುತ್ತೇವೆ'', ಎಂದು ಎಚ್ಚರಿಕೆ ನೀಡಿದ್ದಾರೆ.

''ಮಾರ್ಚ್ 20ರಂದು ಮಹಾರಾಷ್ಟ್ರದ ಸಾಂಗಲಿ, ಮಿರಜ, ಕೊಲ್ಲಾಪುರ, ಸಾತಾರಾ ಜಿಲ್ಲೆಗಳಲ್ಲಿ ಇರುವ ಕನ್ನಡಿಗರು ಅಂಗಡಿಗಳನ್ನು ಬಂದ್ ಮಾಡಿ ಕರ್ನಾಟಕದಲ್ಲಿರುವ ಮರಾಠಿ ಭಾಷಿಕರಿಗೆ ಬೆಂಬಲ ಸೂಚಿಸಬೇಕು,'' ಎಂದು ಕರೆ ನೀಡುವ ಮೂಲಕ ಪರೋಕ್ಷವಾಗಿ ಬೆದರಿಕೆ ಹಾಕಿದ್ದಾರೆ.

ಮಹಾರಾಷ್ಟ್ರದಲ್ಲಿ ಅಧಿಕಾರಕ್ಕೆ ಬಂದಾಗಿನಿಂದ ಭಾಷೆ, ಗಡಿ ವಿಷಯದಲ್ಲಿ ಕಿರಿಕ್ ಮಾಡುತ್ತಲೇ ಇರುವ ಶಿವಸೇನೆ ಕಳೆದ ಕೆಲ ದಿನಗಳಿಂದ ಅತಿರೇಕದ ವರ್ತನೆ ತೋರುತ್ತಿದೆ. ಕೆಲ ದಿನಗಳ ಹಿಂದೆ ಕೊಲ್ಲಾಪುರದಲ್ಲಿ ಕರ್ನಾಟಕದ ಸಾರಿಗೆ ಸಂಸ್ಥೆ ಬಸ್‌ಗಳ ನಿಲುಗಡೆಗೆ ತಕರಾರು ಮಾಡಿತ್ತು. ಬಳಿಕ ಕನ್ನಡ ನಾಮಫಲಕಗಳಿಗೆ ಮಸಿ ಬಳಿದು ಪುಂಡಾಟಿಕೆ ತೋರಿತ್ತು. ಈಗ ಕನ್ನಡ ಧ್ವಜದ ನೆಪವೊಡ್ಡಿ ಮತ್ತೆ ಕಾಲು ಕೆರೆದು ಜಗಳಕ್ಕೆ ಮುಂದಾಗಿದೆ.

ಈ ಮಧ್ಯೆ ಎರಡು ದಿನಗಳು ಸ್ಥಗಿತಗೊಂಡಿದ್ದ ಕರ್ನಾಟಕ, ಮಹಾರಾಷ್ಟ್ರ ರಾಜ್ಯಗಳ ನಡುವಿನ ಬಸ್ ಸಂಚಾರ ಸೋಮವಾರ ಸಂಜೆ ಪೊಲೀಸ್ ಭದ್ರತೆಯ ಭರವಸೆಯ ಮೇಲೆ ಆರಂಭವಾಗಿದೆ.

### [illegible]

ನಗರದಲ್ಲಿರುವ ಶಿವಸೇನೆ ಕಚೇರಿ ಬಂದ್ ಮಾಡುವಂತೆ ಆಗ್ರಹಿಸಿ ಕನ್ನಡ ಸಂಘಟನೆಗಳ ಕ್ರಿಯಾ ಸಮಿತಿ ಗೃಹ ಸಚಿವರಿಗೆ ಮನವಿ ಸಲ್ಲಿಸಿದೆ. ಸೋಮವಾರ ಜಿಲ್ಲಾಧಿಕಾರಿ ಮೂಲಕ ಮನವಿ ಸಲ್ಲಿಸಿದ ಸಮಿತಿಯ ಪದಾಧಿಕಾರಿಗಳು, ಮಹಾರಾಷ್ಟ್ರ ಸರಕಾರದಿಂದ ನೆರವು ಪಡೆದು ರಾಜ್ಯದಲ್ಲಿ ನಾಡದ್ರೋಹಿ ಚಟುವಟಿಕೆ ಮಾಡುತ್ತಿರುವ ಶಿವಸೇನೆ ಕಚೇರಿಯನ್ನು ಕೂಡಲೇ ಬಂದ್ ಮಾಡಬೇಕು ಎಂದು ಒತ್ತಾಯಿಸಿದರು.

### ನಾಲ್ವರ ವಿರುದ್ಧ ಪ್ರಕರಣ

'ಮರಾಠಿ ಮಾತನಾಡುವ ಜನರು ಹುಲಿಗಳು' ಎಂದು ಮೊಬೈಲ್‌ನಲ್ಲಿ ಸ್ಟೇಟಸ್ ಹಾಕಿಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ವಿಡಿಯೊ ಅಪ್ಲೋಡ್ ಮಾಡುತ್ತಿದ್ದ ಮಚ್ಚೆ ಗ್ರಾಮದ ನಾಲ್ವರ ವಿರುದ್ಧ ಕೇಸ್ ದಾಖಲಾಗಿದೆ.

### ಕರ್ನಾಟಕದ ಸಂಸದರ ತಿರುಗೇಟು

ಬೆಳಗಾವಿಯಲ್ಲಿ ನಡೆಯುತ್ತಿರುವ ಗಡಿ ಸಂಘರ್ಷ ಕುರಿತು ಸಂಸತ್ತಿನಲ್ಲಿ ಶಿವಸೇನೆ ಪ್ರಸ್ತಾಪಿಸಿದೆ. ''ಕರ್ನಾಟಕದಲ್ಲಿ ಮರಾಠಿ ಭಾಷಿಕರ ಮೇಲೆ ಹಲ್ಲೆ ನಡೆಯುತ್ತಿದ್ದು, ಆತಂಕದ ಸ್ಥಿತಿ ನಿರ್ಮಾಣವಾಗಿದೆ,'' ಎಂದು ಶಿವಸೇನೆ ಸಂಸದ ಅರವಿಂದ್ ಸಾವಂತ್ ಲೋಕಸಭೆಯ ಶೂನ್ಯ ವೇಳೆಯಲ್ಲಿ ಹೇಳಿದರು.



. ಇದಕ್ಕೆ ಕರ್ನಾಟಕದ ಬಿಜೆಪಿ ಸದಸ್ಯರಿಂದ ತೀವ್ರ ಆಕ್ಷೇಪ ವ್ಯಕ್ತವಾಯಿತು. ''ಮೈತ್ರಿ ಸರಕಾರ ನಡೆಸಲಾಗದೇ ತಿಣುಕಾಡುತ್ತಿರುವ ಶಿವಸೇನೆ ಆಡಳಿತ ವೈಫಲ್ಯ ಮರೆಮಾಚುವುದಕ್ಕಾಗಿಯೇ ಬೆಳಗಾವಿ ವಿವಾದ ಸೃಷ್ಟಿ ಮಾಡಿದೆ,'' ಎಂದು ಸಂಸದ ಶಿವಕುಮಾರ್ ಉದಾಸಿ ಟೀಕಿಸಿದರು.